ಆ) ಈ ಸಮೀಕ್ಷೆಯ ಕಾರ್ಯಕ್ಕಾಗಿ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಇದುವರೆಗೆ 46,49,852 ಲಕ್ಷ ರೂಪಾಯಿಗಳನ್ನು ಬಿಡುಗಡೆ ಮಾಡಲಾಗಿದೆ.

ಸಮೀಕ್ಷಾ ವರದಿಯ ಆಧಾರದ ಮೇಲೆ ಈಗಿರುವ ಕೆಲವು ಯೋಜನೆಗಳನ್ನು ಮಾರ್ಪಡಿಸುವುದಲ್ಲದೆ ಹೆಚ್ಚಿನ ಅಭಿವೃದ್ಧಿಗೊಸ್ಕರ ಹೊಸ ಯೋಜನೆಗಳನ್ನು ರೂಪಿಸಿ ಕಾರ್ಯಗತಗೊಳಿಸಲು ಉದ್ದೇಶಿಸಲಾಗಿದೆ.

ಇ) ಪರಿಶಿಷ್ಟ ಜಾತಿ: ಪರಿಶಿಷ್ಟ ವರ್ಗಗಳ ಜನರ ಶವ ಸಂಸ್ಕಾರಕ್ಕಾಗಿ 1000-00 ರೂಪಾಯಿಗಳನ್ನು ಮಹಾನಗರಪಾಲಿಕೆ, ಪುರಸಭೆ ಮತ್ತು ನಗರಸಭೆಗಳ ಶೇಕಡ 18ರ ಹಣದಲ್ಲಿ ನೀಡಲು ಸರ್ಕಾರವು ಆದೇಶಿಸಿ, ದಿನಾಂಕ 16-12-95ರಲ್ಲಿ ಸುತ್ತೋಲೆ ಹೊರಡಿಸಿದೆ. ಈ ಸುತ್ತೋಲೆಯನ್ನು ಎಲ್ಲಾ ಜಿಲ್ಲಾಧಿಕಾರಿಗಳು, ಆಯುಕ್ತರು, ಮಹಾನಗರಪಾಲಿಕೆ, ನಗರಸಭೆ, ಪುರಸಭೆಗಳಿಗೆ ಮತ್ತು ಪಂಚಾಯತ್‌ಗೆ ಸೂಕ್ತ ಕ್ರಮಕ್ಕಾಗಿ ಕಳುಹಿಸಲಾಗಿದೆ. ಈ ಸರ್ಕಾರದ ಸುತ್ತೋಲೆಯನ್ನು ಇತ್ತೀಚೆಗೆ ಕಳುಹಿಸಿರುವುದರಿಂದ ಈ ಬಗ್ಗೆ ನೀಡಲಾದ ಹಣದ ವಿವರ ಇದುವರೆಗೆ ವರದಿಯಾಗಿರುವುದಿಲ್ಲ.

ಆಶ್ರಯ ಯೋಜನೆಯಲ್ಲಿ ಆದ ಅವ್ಯವಹಾರಗಳಿಗೆ ತನಿಖೆ

539 - ಶ್ರೀ ಬಿ.ಎಸ್. ಯಡಿಯೂರಪ್ಪ (ಶಿಕಾರಿಪುರ) : ಮಾನ್ಯ ವಸತಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಆಶ್ರಯ ಯೋಜನೆಯಲ್ಲಿ ನಡೆದ ಅವ್ಯವಹಾರಗಳ ಬಗ್ಗೆ ತನಿಕೆ ನಡೆಸಿದ ಸಿ.ಓ.ಡಿ.ಯು ಸರ್ಕಾರಕ್ಕೆ ವರದಿ ಸಲ್ಲಿಸಿದೆಯೇ?

ಆ) ಹಾಗಿದ್ದಲ್ಲಿ, ಆರೋಪಿಗಳ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಬಸವರಾಜ ರಾಯರೆಡ್ಡಿ (ವಸತಿ ರಾಜ್ಯ ಸಚಿವರು) :

ಅ) ಸಿ.ಓ.ಡಿ. ತಾತ್ಕಾಲಿಕ ವರದಿಯನ್ನು ಸರ್ಕಾರಕ್ಕೆ ದಿನಾಂಕ 28-2-94 ರಂದು ಸಲ್ಲಿಸಿದೆ. ಆದರೆ, ಸಿ.ಓ.ಡಿ. ಯಿಂದ ಇನ್ನೂ ಅಂತಿಮ ವರದಿಯು ಬಂದಿರುವುದಿಲ್ಲ.

ಆ) ಸಂಬಂಧಪಟ್ಟ ಅಧಿಕಾರಿಗಳನ್ನು ಆಶ್ರಯ ಅವ್ಯವಹಾರಗಳಲ್ಲಿ ತೊಡಗಿದ್ದವರನ್ನು ಸೇವೆಯಿಂದ ಅಮಾನತ್ತುಗೊಳಿಸಿ, ಆರೋಪಿಗಳ ವಿರುದ್ಧ ಇಲಾಖಾ ಶಿಸ್ತು ಕ್ರಮ ಕೈಗೊಳ್ಳಲಾಗಿದೆ.

ಕೋಲಾರ ಜಿಲ್ಲೆಯಲ್ಲಿ ವಸತಿ ಹೀನರಿಗೆ ಮನೆ ಮಂಜೂರಾತಿ

541 - ಶ್ರೀ ವಿ. ಮುನಿಯಪ್ಪ (ಶಿಡ್ಲಘಟ್ಟ) : ಮಾನ್ಯ ವಸತಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳ ದಯವಿಟ್ಟು ಉತ್ತರಿಸುವರೆ?

ಅ) ಕೋಲಾರ ಜಿಲ್ಲೆಯಲ್ಲಿ 1995ನೇ ಸಾಲಿನ ಸಮೀಕ್ಷೆ ಪ್ರಕಾರ ನಿವೇಶನ ಮತ್ತು ವಸತಿ ಹೀನರ ಸಂಖ್ಯೆ ಎಷ್ಟು (ತಾಲ್ಲೂಕುವಾರು ವಿವರಗಳನ್ನು ನೀಡುವುದು).